**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 445 (628)<br>(ಒಳಾಡಳಿತ ಇಲಾಖೆಯಿಂದ ವರ್ಗಾವಣೆಗೊಂಡಿರುವ) |
| ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 11.12.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ K-SET ಪರೀಕ್ಷೆಯಲ್ಲಿ ಹೆಣ್ಣುಮಕ್ಕಳ ಕಿವಿಯೋಲೆ ಮತ್ತು ಮೂಗುತಿ ತೆಗೆಸಿದ ಘಟನೆ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು 2025ನೇ ಸಾಲಿನ ಕೆ-ಸೆಟ್ ಪರೀಕ್ಷೆಯನ್ನು ದಿನಾಂಕ: 02.11.2025 ರಂದು ನಡೆಸಿರುತ್ತದೆ.<br><br>ಪ್ರಾಧಿಕಾರವು ನಡೆಸುವ ಕೆ-ಸೆಟ್ ಪರೀಕ್ಷೆ ಸೇರಿದಂತೆ ವಿವಿಧ ನೇಮಕಾತಿ ಪರೀಕ್ಷೆ, ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಪ್ರವೇಶ ಪರೀಕ್ಷೆಗೆ ವಸ್ತ್ರ ಸಂಹಿತೆಯನ್ನು ನೀಡಲಾಗಿರುತ್ತದೆ. ವಸ್ತ್ರ ಸಂಹಿತೆಯ ಪ್ರತಿಯನ್ನು **ಅನುಬಂಧ-01** ರಲ್ಲಿ ನೀಡಲಾಗಿದೆ.<br><br>ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸುವ ಭಾಗವಾಗಿ ಮಹಿಳಾ ಅಭ್ಯರ್ಥಿಗಳಿಗೆ ಕಾಲುಂಗುರ ಮತ್ತು ಮಾಂಗಲ್ಯವನ್ನು ಹೊರತುಪಡಿಸಿ, ಯಾವುದೇ ಲೋಹದ ರೀತಿಯ ಆಭರಣಗಳನ್ನು ಧರಿಸಿ ಪರೀಕ್ಷಾ ಕೇಂದ್ರಕ್ಕೆ ಬರಬಾರದಾಗಿ ಪ್ರವೇಶ ಪತ್ರದಲ್ಲಿ (Hall Ticket) ಲಿಖಿತವಾಗಿ ತಿಳಿಸಲಾಗಿರುತ್ತದೆ ಹಾಗೂ ಇದನ್ನು ಎಲ್ಲಾ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ಎಲ್ಲರೂ ಪಾಲಿಸುತ್ತಿದ್ದಾರೆ.<br><br>2025ನೇ ಸಾಲಿನ ಕೆ-ಸೆಟ್ ಪರೀಕ್ಷೆಯಲ್ಲಿ ಹೆಣ್ಣುಮಕ್ಕಳ ಆಭರಣಗಳನ್ನು ಬಲವಂತವಾಗಿ ತೆಗೆಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಗಳ ಆತ್ಮ ಗೌರವಕ್ಕೆ ಧಕ್ಕೆ ಉಂಟಾಗುವ ಯಾವುದೇ ಘಟನೆಯು ಪರೀಕ್ಷಾ ಕೇಂದ್ರಗಳಲ್ಲಿ ನಡೆದಿರುವುದಿಲ್ಲ. ಹಾಗೆಯೇ, ಯಾವುದೇ ದೂರುಗಳು ಪರೀಕ್ಷಾ ಕೇಂದ್ರಗಳಿಂದಾಗಲೀ, ಅಭ್ಯರ್ಥಿಗಳಿಂದಾಗಲೀ ಪ್ರಾಧಿಕಾರಕ್ಕೆ ಸ್ವೀಕೃತವಾಗಿರುವುದಿಲ್ಲ. |
| ಆ) | ಧಾರ್ಮಿಕ / ಸಾಂಸ್ಕೃತಿಕ ಆಭರಣಗಳನ್ನು ಬಲವಂತವಾಗಿ ತೆಗೆಸುವ ಕುರಿತು ಯಾವುದೇ ಸಾಮಾನ್ಯ ಕಾರ್ಯಾಚರಣೆ ಪ್ರಕ್ರಿಯೆ (SOP) ಪರೀಕ್ಷಾ ಸಂಸ್ಥೆಗೆ ನೀಡಲಾಗಿತ್ತೇ; (ಪ್ರತಿಯನ್ನು ಒದಗಿಸುವುದು) | |
| ಇ) | ವಿದ್ಯಾರ್ಥಿನಿಯರ ಆತ್ಮಗೌರವಕ್ಕೆ ಧಕ್ಕೆ ಉಂಟಾಗುವ ಈ ಕ್ರಮವನ್ನು ಅನುಮತಿಸಿದ ಅಧಿಕಾರಿಗಳು ಯಾರು; ಅವರ ಮೇಲೆ ಕ್ರಮ ಕೈಗೊಳ್ಳಲಾಗುತ್ತದೆಯೇ; (ವಿವರ ಒದಗಿಸುವುದು) | |
| ಈ) | ವಿದ್ಯಾರ್ಥಿನಿಯರ ಧಾರ್ಮಿಕ ಭಾವನೆಗೆ ಧಕ್ಕೆ ಉಂಟಾಗಿರುವ ಈ ಘಟನೆಗೆ ಸರ್ಕಾರ ಯಾರು ಜವಾಬ್ದಾರರೆಂದು ಪರಿಗಣಿಸುತ್ತದೆ; (ವಿವರ ಒದಗಿಸುವುದು) | |
| ಉ) | ಮುಂದಿನ ಪರೀಕ್ಷೆಗಳಲ್ಲಿ ಇಂತಹ ಅವಮಾನಕಾರಿ ಘಟನೆಗಳು ಮರುಕಳಿಸದಂತೆ ಸ್ಪಷ್ಟ ಮಾರ್ಗಸೂಚಿಗಳನ್ನು ರೂಪಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುತ್ತದೆಯೇ? (ವಿವರ ಒದಗಿಸುವುದು) | ವಿವಿಧ ನೇಮಕಾತಿ ಪರೀಕ್ಷೆ, ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಪ್ರವೇಶ ಪರೀಕ್ಷೆಯಲ್ಲಿ ಅನುಸರಿಸಬೇಕಾದ ವಸ್ತ್ರ ಸಂಹಿತೆಯ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. |

**ಸಂಖ್ಯೆ:ಇಡಿ 384 ಟಿಇಸಿ 2025**

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

ಅನುಬಂಧ

No: ED/KEA/EXAM/DRESSCODE/2025

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ ವಿವಿಧ ನೇಮಕಾತಿ ಪರೀಕ್ಷೆ, ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಪ್ರವೇಶ ಪರೀಕ್ಷೆಗೆ ವಸ್ತ್ರಸಂಹಿತೆ**

ಪುರುಷ ಅಭ್ಯರ್ಥಿಗಳ ವಸ್ತ್ರ ಸಂಹಿತೆ:

- ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಶರ್ಟ್‌ಗಳನ್ನು ಅನುಮತಿಸಲಾಗುವುದಿಲ್ಲವಾದ್ದರಿಂದ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್‌ಗಳನ್ನು ಧರಿಸುವುದನ್ನು ಖಚಿತಪಡಿಸಿಕೊಳ್ಳಬೇಕು. ಸಾಧ್ಯವಾದಷ್ಟು ಕಾಲರ್‌ರಹಿತ ಸಾಧಾರಣ ಶರ್ಟ್/ ಟಿ-ಶರ್ಟ್ ಧರಿಸಲು ಆದ್ಯತೆ ನೀಡುವುದು.
- ಪ್ಯಾಂಟ್ ಮತ್ತು ಸರಳ ಪ್ಯಾಂಟ್ (ಜೇಬುಗಳು ಇಲ್ಲದಿರುವ / ಕಮ್ಮಿ ಜೇಬುಗಳಿರುವ) ಪುರುಷ ಅಭ್ಯರ್ಥಿಗಳಿಗೆ ಆದ್ಯತೆಯ ಡ್ರೆಸ್ ಕೋಡ್ ಆಗಿದೆ. ಕುರ್ತಾ ಪೈಜಾಮವನ್ನು, ಜೀನ್ಸ್ ಪ್ಯಾಂಟ್ ಅನುಮತಿಸುವುದಿಲ್ಲ.
- ಪುರುಷ ಅಭ್ಯರ್ಥಿಗಳು ಧರಿಸುವ ಬಟ್ಟೆಗಳು ಹಗುರವಾಗಿರಬೇಕು ಅಂದರೆ ಜಿಪ್ (ZIP) ಪಾಕೆಟ್‌ಗಳು, ಪಾಕೆಟ್‌ಗಳು, ದೊಡ್ಡ ಬಟನ್‌ಗಳು ಮತ್ತು ವಿಸ್ತಾರವಾದ ಕಸೂತಿ ಇರುವ ಬಟ್ಟೆಗಳು ಇರಬಾರದು.
- ಪರೀಕ್ಷಾ ಹಾಲ್ ಒಳಗೆ ಶೂಗಳನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಸ್ಯಾಂಡಲ್ ಅಥವಾ ತೆಳುವಾದ ಅಡಿಭಾಗ ಇರುವ ಚಪ್ಪಲಿಗಳನ್ನು ಧರಿಸುವುದು.
- ಅಭ್ಯರ್ಥಿಗಳು ಕುತ್ತಿಗೆಯ ಸುತ್ತ ಯಾವುದೇ ಲೋಹದ ಆಭರಣಗಳನ್ನು ಧರಿಸುವುದು ಅಥವಾ ಕಿವಿಯೋಲೆಗಳು, ಉಂಗುರಗಳು ಮತ್ತು ಕಡಗಗಳನ್ನು ಧರಿಸುವುದು ನಿಷೇಧಿಸಲಾಗಿದೆ.

ಮಹಿಳಾ ಅಭ್ಯರ್ಥಿಗಳ ವಸ್ತ್ರ ಸಂಹಿತೆ

- ಮಹಿಳಾ ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚ್‌ಗಳು ಅಥವಾ ಬಟನ್‌ಗಳು ಹೊಂದಿರುವ ಬಟ್ಟೆಗಳನ್ನು ಧರಿಸುವುದು ನಿಷೇಧಿಸಲಾಗಿದೆ.
- ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಬಟ್ಟೆಗಳನ್ನು / ಜೀನ್ಸ್ ಪ್ಯಾಂಟ್ ಧರಿಸಬಾರದು, ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಮುಜುಗರವಾಗದಂತೆ ಮತ್ತು ಮೇಲೆ ಉಲ್ಲೇಖಿಸಿರುವ ಬಗೆಯಲ್ಲಿ ನಿಯಮದಂತೆ ಧರಿಸುವಂತೆ ನಿರ್ದೇಶಿಸಲಾಗಿದೆ.
- ಎತ್ತರವಾದ ಹಿಮ್ಮಡಿಯ ಶೂಗಳನ್ನು/ ಚಪ್ಪಲಿಗಳನ್ನು ಮತ್ತು ದಪ್ಪವಾದ ಅಡಿ ಭಾಗ ಹೊಂದಿರುವ ಶೂಗಳನ್ನಾಗಲಿ/ ಚಪ್ಪಲಿಗಳನ್ನಾಗಲಿ ಧರಿಸಬಾರದು, ತೆಳುವಾದ ಅಡಿಭಾಗ ಹೊಂದಿರುವ ಚಪ್ಪಲಿಗಳು ಧರಿಸುವುದು ಕಡ್ಡಾಯವಾಗಿದೆ.
- ಮಹಿಳಾ ಅಭ್ಯರ್ಥಿಗಳು ಯಾವುದೇ ರೀತಿಯ ಲೋಹದ ಆಭರಣಗಳನ್ನು ಧರಿಸುವುದನ್ನು ನಿಷೇಧಿಸಿದೆ. (ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ).

ನಿಷೇಧಿತ ವಸ್ತುಗಳ ಪಟ್ಟಿ :

- ಡ್ರೆಸ್ ಕೋಡ್ ಅನ್ನು ಅನುಸರಿಸುವುದರ ಜೊತೆಗೆ, ಕೆಳಗೆ ಪಟ್ಟಿ ಮಾಡಲಾದ ಯಾವುದೇ ನಿಷೇಧಿತ ವಸ್ತುಗಳನ್ನು ಪರೀಕ್ಷಾ ಕೇಂದ್ರಕ್ಕೆ ತೆಗೆದುಕೊಂಡು ಹೋಗದಂತೆ, ಅಭ್ಯರ್ಥಿಗಳು ಖಚಿತಪಡಿಸಿಕೊಳ್ಳಬೇಕು.
- ಎಲೆಕ್ಟ್ರಾನಿಕ್ ವಸ್ತುಗಳು, ಮೊಬೈಲ್ ಫೋನ್‌ಗಳು, ಪೆನ್ ಡ್ರೈವ್‌ಗಳು, ಇಯರ್ ಫೋನ್‌ಗಳು, ಮೈಕ್ರೋಫೋನ್‌ಗಳು, ಬ್ಲೂ ಟೂಥ್ ಸಾಧನಗಳು ಮತ್ತು ಕೈ ಗಡಿಯಾರಗಳನ್ನು ಪರೀಕ್ಷಾ ಕೊಠಡಿಯೊಳಗೆ ಅನುಮತಿಸಲಾಗುವುದಿಲ್ಲ.
- ತಿನ್ನಬಹುದಾದ ಪದಾರ್ಥಗಳನ್ನು ಪರೀಕ್ಷಾ ಕೊಠಡಿಯೊಳಗೆ ತರುವುದನ್ನು ಹಾಗು ತಿನ್ನುವುದನ್ನು ನಿಷೇಧಿಸಲಾಗಿದೆ, ಬಣ್ಣದ ಹಾಗೂ ಲೋಹದ ಕುಡಿಯುವ ನೀರಿನ ಬಾಟಲಿಗೂ ಸಹ ಅನುಮತಿ ಇರುವುದಿಲ್ಲ.
- ಪರೀಕ್ಷಾ ಕೇಂದ್ರದಲ್ಲಿಯೇ ಕುಡಿಯುವ ನೀರಿಗೆ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು.
- ಪೆನ್ಸಿಲ್, ಪೇಪರ್, ಎರೇಸರ್, ಜಾಮಿಟ್ರಿ ಬಾಕ್ಸ್ ಗಳು ಮತ್ತು ಲಾಗ್ ಟೇಬಲ್ ಗಳನ್ನು ಪರೀಕ್ಷಾ ಕೇಂದ್ರದೊಳಗೆ ತರುವಂತಿಲ್ಲ.
- ತಲೆಯ ಮೇಲೆ ಟೋಪಿ/ HAT ಧರಿಸುವಂತಿಲ್ಲ.
- ಯಾವುದೇ ರೀತಿಯ ಮುಖ ಮುಚ್ಚುವಂತ ಮಾಸ್ಕನ್ನು ಧರಿಸುವಂತಿಲ್ಲ.

ಪರೀಕ್ಷೆಯ ದಿನದಂದು ಈ ಕೆಳಗಿನ ವಸ್ತುಗಳನ್ನು ಮಾತ್ರ ತರಲು ಅನುಮತಿಸಲಾಗಿದೆ :

- ಪ್ರವೇಶ ಪತ್ರವನ್ನು ಎಲ್ಲಾ ಅಭ್ಯರ್ಥಿಗಳು ಖಡ್ಡಾಯವಾಗಿ ತರುವುದು.
- ಸರ್ಕಾರದಿಂದ ಮಾನ್ಯವಾದ ಫೋಟೋ ಗುರುತಿನ ಚೀಟಿಯನ್ನು ತರುವುದು ಖಡ್ಡಾಯಗೊಳಿಸಲಾಗಿದೆ.
- ಪರೀಕ್ಷೆಯ ಕೊನೆಯ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರಗೆ ಹೋಗಲು ಅನುಮತಿ ಇರುವುದಿಲ್ಲ.

**ಮೇಲೆ ನಿಗದಿಪಡಿಸಲಾದ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸತಕ್ಕದ್ದು, ಇಲ್ಲವಾದಲ್ಲಿ ನಿಯಮಾನುಸಾರ ಅಭ್ಯರ್ಥಿಗಳ ಮೇಲೆ ಕಠಿಣ ಕ್ರಮವನ್ನು ಜರುಗಿಸಲಾಗುವುದು.**

ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ

**No: ED/KEA/EXAM/DRESSCODE/2025**

**Dress Code for various Competitive/Entrance/Recruitment Examinations conducted by Karnataka Examinations Authority**

**Dress Code for Male Candidates:**

- Male candidates should ensure that they wear half-sleeved shirts, as full-sleeved shirts are not permitted on the day of the examination. Collarless shirts are preferred wherever possible.
- Trousers (without pockets/with minimal pockets) are the preferred dress code for male candidates. Kurta pyjamas, jeans are not permitted
- The clothes worn by male candidates should be light i.e. no zip pockets, pockets, large buttons and elaborate embroidery.
- Shoes are strictly prohibited inside the examination hall. Candidates are advised to wear sandals or flat-soled slippers.
- Candidates are prohibited from wearing any metal jewellery around the neck wearing earrings, rings and bracelets.

**Dress Code for Female Candidates:**

- Female candidates are prohibited from wearing clothes with elaborate embroidery, flowers, brooches or buttons.
- Full-sleeved clothes/jeans should not be worn on the day of the examination, instead they are directed to wear half-sleeved clothes.
- Shoes, High Heeled slippers and sandals should not be worn. Thin-soled Slippers/sandals are mandatory.
- Female candidates are prohibited from wearing all kinds of metal jewellery. (Except for Mangalsutra and Toe ring).

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in

**Candidates should ensure that they do not bring any prohibited items to the examination centre as listed below**:

- Electronic devices, mobile phones, pen drives, earphones, microphones, wallets, goggles, bluetooth devices, calculators and wrist watches are not allowed inside the examination hall.
- Bringing and eating edible items in the examination hall is prohibited, transparent drinking water bottles are allowed.
- Drinking water will be provided at the examination centre.
- Pencils, paper, scales, erasers, geometry boxes and log tables are not allowed inside the examination centre.
- Cap/Hats should not be worn on the head.
- Masks covering face and ear of any kind should not be worn.

**Only the following items are allowed to be brought on the day of the examination**:

- It is mandatory for all candidates to carry the admit card.
- It is mandatory for candidates to carry their valid Government issued photo identity card and blue/black ball point pen.

**Instructions**:

1. ***Candidates will not be allowed to leave the examination hall till the last bell of the examination.***
2. ***Candidates must strictly follow the above mentioned KEA rules, failing which strict action will be taken against the candidates as per the rules.***

Executive Director

Karnataka Examinations Authority